**ಕರ್ನಾಟಕ ಸರ್ಕಾರ**

# ಭ್ರಷ್ಟಾಚಾರ ನಿಗ್ರಹ ದಳ

**ದಿನಾಂಕ: 07.01.2019**

## ಪತ್ರಿಕಾ ಪ್ರಕಟಣೆ

ಕೋಲಾರ ಜಿಲ್ಲೆಯ, ಮಾಲೂರು ತಾಲ್ಲೂಕು, ಟೇಕಲ್ ಹೋಬಳಿ, ಯಲಿವಳ್ಳಿ ಗ್ರಾಮದ ನಿವಾಸಿಯೊಬ್ಬರಿಗೆ ನರೇಗಾ ಯೋಜನೆಯಡಿಯಲ್ಲಿ ಕೈಗೊಂಡಿದ್ದ ಕಾಮಗಾರಿ ಬಿಲ್ ಮೊತ್ತ ರೂ.79,000/– ಮಂಜೂರು ಮಾಡಲು ಕೋರಿರುತ್ತಾರೆ. ಶ್ರೀ. ನಾರಾಯಣಸ್ವಾಮಿ ಪಿ.ಡಿ.ಒ, ಬನಹಳ್ಳಿ ಗ್ರಾಮ ಪಂಚಾಯಿತಿ ರವರು ರೂ.3,000/– ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:07/01/2019 ರಂದು ರೂ.2,500/– ಲಂಚದ ಹಣವನ್ನು ಫಿರ್ಯಾದುದಾರರಿಂದ ಪಡೆದುಕೊಳ್ಳುವ ಸಂದರ್ಭದಲ್ಲಿ ಕೋಲಾರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.